# Bangalore
# Regional News
# 15.07.2026 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಭಾರತ-ಬ್ರಿಟನ್ ನಡುವೆ ಮುಕ್ತ ವ್ಯಾಪಾರ ಒಪ್ಪಂದ ಹಿನ್ನೆಲೆ : ಬೆಂಗಳೂರಿನ ಜಿಂದಾಲ್‌ನಿಂದ ಅಲ್ಯೂಮಿನಿಯಂ ಉತ್ಪನ್ನಗಳ ರವಾನೆ
2. ನವದೆಹಲಿಯಲ್ಲಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆ; ಕರ್ನಾಟಕ, ತಮಿಳುನಾಡು, ಕೇರಳ, ಪುದುಚೇರಿ ಅಧಿಕಾರಿಗಳು ಭಾಗಿ
3. ಆಸ್ತಿಯ ಸಂಪೂರ್ಣ ಹಕ್ಕು ಮಾಲೀಕರಿಗಿರಬೇಕು ; ವಸತಿ ಸಮ್ಮುಚ್ಛಯಗಳ ಪ್ರತಿನಿಧಿಗಳೊಂದಿಗಿನ ಸಂವಾದದಲ್ಲಿ ಮುಖ್ಯಮಂತ್ರಿ ಅಭಿಮತ
4. ಕರ್ನಾಟಕ ಶಾಶ್ವತ ನಿವಾಸ ಪ್ರಮಾಣ ಪತ್ರ ರದ್ದುಪಡಿಸುವಂತೆ ರಾಜ್ಯಪಾಲರಿಗೆ ಬಿಜೆಪಿ ಮನವಿ

<><><><>

ಭಾರತ ಮತ್ತು ಯುಕೆ ನಡುವಿನ ಐತಿಹಾಸಿಕ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ-ಸಿಇಟಿಎ ಹಾಗೂ ಸಾಮಾಜಿಕ ಭದ್ರತೆ ಒಪ್ಪಂದವಾದ ದ್ವಿಗುಣ ಕೊಡುಗೆ ಒಪ್ಪಂದ-ಡಿಸಿಸಿ ಇಂದಿನಿಂದ ಅಧಿಕೃತವಾಗಿ ಅನುಷ್ಠಾನಗೊಂಡಿದೆ. ಈ ಒಪ್ಪಂದ, ಬ್ರಿಟನ್ ಮಾರುಕಟ್ಟೆಯಲ್ಲಿ ಶೇಕಡಾ ೯೯ ರಷ್ಟು ಭಾರತೀಯ ಉತ್ಪನ್ನಗಳಿಗೆ ಸಂಪೂರ್ಣ ಸುಂಕ ರಹಿತ ಪ್ರವೇಶ ಕಲ್ಪಿಸಲಿದ್ದು, ಉಭಯ ದೇಶಗಳ ನಡುವಿನ ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳಲ್ಲಿ ಹೊಸ ಅಧ್ಯಾಯಕ್ಕೆ ನಾಂದಿ ಹಾಡಲಿದೆ. ಈ ಒಪ್ಪಂದದ ಅಡಿಯಲ್ಲಿ ಇಂದು ಬೆಂಗಳೂರಿನ ಜಿಂದಾಲ್ ಅಲ್ಯೂಮಿನಿಯಂನಿಂದ ಅಲ್ಯೂಮಿನಿಯಂ ಉತ್ಪನ್ನಗಳನ್ನು ಮೊದಲ ಬಾರಿಗೆ ರವಾನಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯದಲ್ಲಿರುವ ಬ್ರಿಟಿಷ್ ಡೆಪ್ಯೂಟಿ ಹೈಕಮಿನಿಷನರ್ ಚಂದ್ರು ಐಯ್ಯರ್ ಮಾತನಾಡಿ, ಈ ಒಪ್ಪಂದದಿಂದಾಗಿ ದಕ್ಷಿಣ ಭಾರತದಿಂದ ರಫ್ತಾಗಲಿರುವ ಹೆಚ್ಚಿನ ಉತ್ಪನ್ನಗಳು ಯುಕೆಯಲ್ಲಿ ಕಡಿಮೆ ಬೆಲೆಗೆ ಸಿಗಲಿದೆ ಎಂದು ತಿಳಿಸಿದ್ದಾರೆ. ರಾಜ್ಯದಿಂದ ಮುಂದಿನ ದಿನಗಳಲ್ಲಿ ಹೆಚ್ಚಿನ ಕಾಫಿ, ಮಸಾಲೆ ಪದಾರ್ಥಗಳು ಹಾಗೂ ಮೀನಿನ ಉತ್ಪನ್ನಗಳು ರವಾನೆಯಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಸ್ಕಾಚ್ ವಿಸ್ಕಿ, ಮಿಠಾಯಿ ಉತ್ಪನ್ನಗಳು, ಐಷರಾಮಿ ಕಾರುಗಳು ಭಾರತದಲ್ಲಿ ಕಡಿಮೆ ಸುಂಕದೊಂದಿಗೆ ಲಭ್ಯವಾಗಲಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ಮಾತನಾಡಿದ ವಾಣಿಜ್ಯ ಸಚಿವಾಲಯದ ನಿರ್ದೇಶಕಿ ಡೊನ್ನಾ ಘೋಷ್, ಈ ಒಪ್ಪಂದದಿಂದ ಸಣ್ಣ ಮತ್ತು ಮಧ್ಯಮ ಉದ್ಯಮಿಗಳು, ಎಂಎಸ್‌ಎಂಇ ಗಳು ಹೆಚ್ಚಿನ ಪ್ರಯೋಜನ ಪಡೆಯಲಿದ್ದಾರೆ ಎಂದು ತಿಳಿಸಿದ್ದಾರೆ.

<><><><>

ನವದೆಹಲಿಯಲ್ಲಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಕಾವೇರಿ ನೀರು ನಿಯಂತ್ರಣ ಸಮಿತಿ ಸಭೆ ಆರಂಭವಾಗಿದೆ. ಸಮಿತಿ ಅಧ್ಯಕ್ಷ ವಿನೀತ್ ಗುಪ್ತಾ ನೇತೃತ್ವದಲ್ಲಿ ನಡೆಯುತ್ತಿರುವ ಹಿರಿಯ ಅಧಿಕಾರಿಗಳ ಸಭೆಯಲ್ಲಿ ಬರ ಹಾಗೂ ಕುಡಿಯುವ ನೀರಿನ ಸಮಸ್ಯೆ ಕುರಿತಂತೆ ರಾಜ್ಯದ ವಾಸ್ತವ ಸ್ಥಿತಿಯನ್ನು ರಾಜ್ಯ ಸರ್ಕಾರ ಸಮರ್ಥವಾಗಿ ಮಂಡಿಸಿದ್ದಾರೆ. ಕಾವೇರಿ ಕೊಳ್ಳದ ವ್ಯಾಪ್ತಿಯ ಜಲಾಶಯಗಳಲ್ಲಿ ಸದ್ಯ ಸಂಗ್ರಹವಾಗಿರುವ ನೀರಿನ ಕುರಿತು ಚರ್ಚೆ ನಡೆಸಲಾಗುತ್ತಿದೆ. ರಾಜ್ಯ ಮಾತ್ರವಲ್ಲದೆ ತಮಿಳುನಾಡು, ಕೇರಳ ಹಾಗೂ ಪುದುಚೇರಿಯ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದಾರೆ. ಈ ನಡುವೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು ರಾಜ್ಯದ ಜಲಾಶಗಳಯ ಸ್ಥಿತಿಗತಿ ಕುರಿತಂತೆ ವಿವರ ನೀಡಿದ್ದಾರೆ. ಪ್ರಮುಖ ಜಲಾನಯನ ಪ್ರದೇಶವಾಗಿರುವ ಮಲೆನಾಡು ಪ್ರದೇಶವು ಅತ್ಯಧಿಕ ಎಂದರೆ ಶೇಕಡ ೩೪ರಷ್ಟು ಮಳೆ ಕೊರತೆಯನ್ನು ದಾಖಲಿಸಿದೆ. ಕರಾವಳಿ ಪ್ರದೇಶ ಶೇಕಡ ೩೦, ಉತ್ತರ ಒಳನಾಡು ಶೇಕಡ ೨೪, ದಕ್ಷಿಣ ಒಳನಾಡು ಶೇಕಡ ೧೮ರಷ್ಟು ಮುಂಗಾರು ಕೊರತೆಯನ್ನು ಎದುರಿಸುತ್ತಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

<><><><>

ಬೆಂಗಳೂರು ಭಾರತದ ಹೃದಯವಾಗಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನಲ್ಲಿಂದು ಕರ್ನಾಟಕ ಅಪಾರ್ಟ್‌ಮೆಂಟ್ ವಿಧೇಯಕ ೨೦೨೫ ಕುರಿತಂತೆ ಅಪಾರ್ಟ್‌ಮೆಂಟ್ ಅಸೋಸಿಯೇಷನ್‌ಗಳ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿ ಮಾತನಾಡಿದ ಅವರು, ಆಸ್ತಿ ಮಾಲೀಕರ ಸಮಸ್ಯೆಗಳ ಬಗ್ಗೆ ಸರ್ಕಾರಕ್ಕೆ ಅರಿವಿದ್ದು, ಆಸ್ತಿಯ ಸಂಪೂರ್ಣ ಹಕ್ಕು ಮಾಲೀಕರಿಗೆ ಇರಬೇಕು ಎಂದು ತಿಳಿಸಿದ್ದಾರೆ.

ಕಷ್ಟಪಟ್ಟು ಗಳಿಸಿರುವ ಆಸ್ತಿಯನ್ನು ಮಾಲೀಕರು ಸರಿಯಾಗಿ ಅನುಭವಿಸಬೇಕೆನ್ನುವುದು ಸರ್ಕಾರದ ಆಶಯವಾಗಿದೆ. ಈ ನಿಟ್ಟಿನಲ್ಲಿ ಸರ್ಕಾರ ರಾಜ್ಯದಲ್ಲಿ ಇ-ಖಾತಾವನ್ನು ಮನೆ ಬಾಗಿಲಿಗೆ ನೀಡುವ ವ್ಯವಸ್ಥೆ ಕಲ್ಪಿಸುವ ಮೂಲಕ ಕ್ರಾಂತಿ ಉಂಟು ಮಾಡಿದೆ ಎಂದು ಹೇಳಿದ್ದಾರೆ. ಬೆಂಗಳೂರಿನ ೪೦ ಲಕ್ಷ ಆಸ್ತಿಗಳಲ್ಲಿ ೨೫ ಲಕ್ಷ ಆಸ್ತಿಗಳಿಗೆ ಇ-ಖಾತಾ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ನಗರದಲ್ಲಿ ಹೈ ರೈಸ್ ಕಟ್ಟಡಗಳ ನಿರ್ಮಾಣಕ್ಕೆ ಹೆಚ್ಚು ಒತ್ತು ನೀಡಲಾಗಿದೆ. ವಿಶ್ವದ ನಾಯಕರು ಬೆಂಗಳೂರಿನತ್ತ

ಆಕರ್ಷಿತರಾಗುತ್ತಿದ್ದು, ವಿದೇಶಿ ಹೂಡಿಕೆದಾರರು ನಗರದಲ್ಲಿ ಹೂಡಿಕೆ ಮಾಡಲು ಆಸಕ್ತಿ ತೋರುತ್ತಿದ್ದಾರೆ ಎಂದು ತಿಳಿಸಿದ್ದಾರೆ.

<><><><>

ಕರ್ನಾಟಕದಲ್ಲಿ ಶಾಶ್ವತ ನಿವಾಸ ಪ್ರಮಾಣಪತ್ರ ನೀಡುವ ರಾಜ್ಯ ಸರ್ಕಾರದ ನಿರ್ಧಾರವನ್ನು ರದ್ದುಪಡಿಸಬೇಕೆಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದ್ದಾರೆ. ಸರ್ಕಾರದ ಈ ನಿರ್ಧಾರವು ಅಕ್ರಮ ಬಾಂಗ್ಲಾದೇಶಿಯರನ್ನು ರಾಜ್ಯದ ಶಾಶ್ವತ ಮತದಾರರನ್ನಾಗಿ ಮಾಡುವ ಹುನ್ನಾರ ಎಂದು ಆರೋಪಿಸಿದ್ದಾರೆ. ಕಾಂಗ್ರೆಸ್‌ಗೆ ಮತ ಹಾಕುವವರನ್ನು ಶಾಶ್ವತ ನಾಗರಿಕರನ್ನಾಗಿ ಮಾಡುವ ಪ್ರಯತ್ನ ಇದಾಗಿದೆ ಎಂದು ದೂರಿದ್ದಾರೆ. ಈ ನಿರ್ಧಾರವು ಮುಂದಿನ ದಿನಗಳಲ್ಲಿ ದೇಶದ ಕಾನೂನು ತೊಡಕುಗಳಿಗೆ ತೊಂದರೆ ಉಂಟು ಮಾಡಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ರಾಜ್ಯಪಾಲರು ಮನವಿಯನ್ನು ಸ್ವೀಕರಿಸಿದ್ದು, ಸರ್ಕಾರಕ್ಕೆ ಸಲಹೆ ನೀಡುವುದಾಗಿ ತಿಳಿಸಿದ್ದಾರೆ ಎಂದು ಆರ್.ಅಶೋಕ ಹೇಳಿದ್ದಾರೆ.

<><><><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ನವದೆಹಲಿಗೆ ಪ್ರಯಾಣ ಬೆಳೆಸಲಿದ್ದು, ಕೇಂದ್ರ ಸಚಿವರನ್ನು ಭೇಟಿ ಮಾಡಿ ಬರ ಪರಿಹಾರ ಸೇರಿದಂತೆ ಹಲವು ವಿಷಯಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ. ಮುಖ್ಯಮಂತ್ರಿ ಅವರ ವಿಶೇಷ ಕರ್ತವ್ಯ ಅಧಿಕಾರಿ ಹಾಗೂ ಪದ ನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ ಬಿ.ಎಸ್.ಶ್ರೀಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ತಮ್ಮ ದೆಹಲಿ ಪ್ರವಾಸದ ವೇಳೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪಕ್ಷದ ವರಿಷ್ಠರೊಂದಿಗೆ ಸಂಪುಟ ವಿಸ್ತರಣೆ ಕುರಿತಂತೆಯೂ ಚರ್ಚೆ ನಡೆಸಲಿದ್ದಾರೆ.

<><><><>

ಕೇಳುಗರನ್ನು ಎಂದಿಗೂ ಲಘುವಾಗಿ ಪರಿಗಣಿಸಬಾರದು ಎಂದು ಪ್ರಸಾರ ಭಾರತಿ ಅಧ್ಯಕ್ಷ ಪ್ರಸೂನ್ ಜೋಶಿ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರು ಆಕಾಶವಾಣಿ ಕೇಂದ್ರಕ್ಕೆ ಇಂದು ಭೇಟಿ ನೀಡಿದ ಅವರು, ಸಿಬ್ಬಂದಿಯೊಂದಿಗೆ ಸಂವಾದ ನಡೆಸಿ ಮಾತನಾಡಿ, ಮಾಧ್ಯಮ ಕ್ಷೇತ್ರದಲ್ಲಿ ಬದಲಾಗುತ್ತಿರುವ ಸ್ವರೂಪವನ್ನು ಸಿಬ್ಬಂದಿ ಅರ್ಥ ಮಾಡಿಕೊಂಡಿರುವುದು ಸಂತಸ ದಾಯಕವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಇಂದಿನ ದಿನಗಳಲ್ಲಿ ತಂತ್ರಜ್ಞಾನ ಮತ್ತು ಜನರ ಜೀವನ ಶೈಲಿ ಅತ್ಯಂತ ವೇಗವಾಗಿ ಬದಲಾಗುತ್ತಿದ್ದು, ಶ್ರೋತೃಗಳು ನಿರ್ದಿಷ್ಟ ಕಾರ್ಯಕ್ರಮಗಳ ಪ್ರಾಕಾರಕ್ಕಿಂತ ತಮ್ಮ ಅನುಕೂಲಕ್ಕೆ ತಕ್ಕಂತೆ ವಿಷಯಗಳನ್ನು ಆಲಿಸಲು ಆದ್ಯತೆ ನೀಡುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಹೊಸ ಕಾಲಘಟ್ಟದ ಅಗತ್ಯಗಳಿಗೆ ಅನುಗುಣವಾಗಿ ಪ್ರಸ್ತುತತೆಯನ್ನು ಉಳಿಸಿಕೊಳ್ಳುವುದು ಅಷ್ಟೇ ಮುಖ್ಯವಾಗಿದೆ ಎಂದು ಸಿಬ್ಬಂದಿಗೆ ಕಿವಿಮಾತು ಹೇಳಿದ್ದಾರೆ.

<><><><>

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಪ್ರಾಯೋಜಿತ ಶೇಕಡ ೫೦ ರಷ್ಟು ಸಂಚಾರ ದಂಡ ರಿಯಾಯಿತಿಗೆ ಉತ್ತಮ ಸ್ಪಂದನೆ ದೊರೆತಿದೆ. ಈ ಯೋಜನೆಯಡಿ ೧೯ ಲಕ್ಷಕ್ಕೂ ಹೆಚ್ಚು ಚಲನ್‌ಗಳನ್ನು ಇತ್ಯರ್ಥಪಡಿಸಿ ೫೫ ಕೋಟಿ ರೂಪಾಯಿ ಆದಾಯ ಸಂಗ್ರಹಿಸಲಾಗಿದೆ. ಇತ್ತೀಚೆನ ಮೆಗಾ ಲೋಕ ಅದಾಲತ್‌ನಲ್ಲಿ ಒಟ್ಟು ೭೮ ಲಕ್ಷ ೭೯ ಸಾವಿರ ಪ್ರಕರಣಗಳು ಇತ್ಯರ್ಥಗೊಂಡು ೩ ಸಾವಿರದ ೧೭ ಕೋಟಿ ರೂಪಾಯಿ ಮೌಲ್ಯದ ವಿವಾದಗಳು ಬಗೆಹರಿದಿವೆ.

<><><><>

ಕೇಂದ್ರ ಸರ್ಕಾರದ 'ಸ್ವಚ್ಛ ಸರ್ವೇಕ್ಷಣಾ' ಸಮೀಕ್ಷೆಯಲ್ಲಿ ದಾವಣಗೆರೆ ನಗರ ರಾಜ್ಯದಲ್ಲೇ ಪ್ರಥಮ ಸ್ಥಾನ ಹಾಗೂ ದೇಶದಲ್ಲಿ ೩೨ನೇ ಶ್ರೇಯಾಂಕ ಗಳಿಸಿ ಅತ್ಯುತ್ತಮ ಸಾಧನೆ ಮಾಡಿದೆ ಎಂದು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಸಮರ್ಥ್ ಶಾಮನೂರು ತಿಳಿಸಿದ್ದಾರೆ. ದಾವಣಗೆರೆ ಸ್ವಚ್ಛತೆಯಲ್ಲಿ ಈ ಮಟ್ಟದ ಸಾಧನೆ ಮಾಡಲು ಸ್ವಚ್ಛತಾ ಕಾರ್ಮಿಕರ ನಿರಂತರ ಶ್ರಮವೇ ಪ್ರಮುಖ ಕಾರಣ ಎಂದು ಹೇಳಿದ್ದಾರೆ. ಮುಂದಿನ ವರ್ಷ ನಿಮ್ಮೆಲ್ಲರ ಸಹಕಾರದಿಂದ ಈ ಶ್ರೇಯಾಂಕವನ್ನು ಮತ್ತಷ್ಟು ಉತ್ತಮಪಡಿಸಿ, ದೇಶದ ಅಗ್ರ ನಗರಗಳ ಪಟ್ಟಿಗೆ ತರುವ ಗುರಿ ಹೊಂದಲಾಗಿದೆ" ಎಂದು ಸ್ಪಷ್ಟಪಡಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>